ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ಶೈಶಾ/ಸದ್ಭಾದಿ/2016-17

ನಿರ್ದೇಶಕರ ಕಛೇರಿ.
ಪದವಿ ಪೂರ್ವ ಶಿಕ್ಷಣ ಇಲಾಖೆ
ಸಂಪಿಗೆ ರಸ್ತೆ, 18ನೇ ಕ್ರಾಸ್
ಮಲ್ಲೇಶ್ವರಂ. ಬೆಂಗಳೂರು-12
ದಿನಾಂಕ: ೩\ -08-2016.

**ಸುತ್ತೋಲೆ**

ವಿಷಯ: ದಿನಾಂಕ 20/08/2016ರ ಶನಿವಾರ "ಸದ್ಭಾವನಾ ದಿನ" ವನ್ನಾಗಿ ಮತ್ತು ದಿನಾಂಕ 20/08/2016 ರಿಂದ 03/09/2016 ರವರೆಗೆ "ಕೋಮು ಸೌಹಾರ್ದ" ಪಾಕ್ಷಿಕ (Communal Harmony Fortnight) ಅನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ:ಸಿಆಸುಇ 01 ರಾಐಸ 2016 ದಿನಾಂಕ 16/08/2016.

*****

ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಕೇಂದ್ರ ಸರ್ಕಾರದ ಆದೇಶದಂತೆ ಪ್ರತಿ ವರ್ಷ 20ನೇ ಆಗಸ್ಟ್ ರಂದು ಸದ್ಭಾವನಾ ದಿನವನ್ನಾಗಿ ಆಚರಿಸಲಾಗುತ್ತಿದೆ. ಅದರಂತೆ ಈ ವರ್ಷ ದಿನಾಂಕ 20/08/2016ರ ಶನಿವಾರದಂದು ಸದ್ಭಾವನಾ ದಿನವನ್ನಾಗಿ ಮತ್ತು ದಿನಾಂಕ 20/08/2016 ರೊಂದ 03/09/2016ರ ವರೆಗೆ ಕೋಮು ಸೌಹಾರ್ದ ಪಾಕ್ಷಿಕ (Communal Harmony Fortnight) ವನ್ನು ರಾಜ್ಯಾದ್ಯಂತ ಆಚರಿಸಬೇಕೆಂದು ಸರ್ಕಾರವು ನಿರ್ಧರಿಸಿದೆ. ಈ ಸಂಬಂಧವಾಗಿ ಭಾರತ ಸ್ಕೌಟ್ಸ್ ಅಂಡ್ ಗೈಡ್ಸ್ ಮತ್ತು ಯೂತ್ ಅಸೋಸೊಯೇಷನ್ ಸಹಕಾರದೊಂದಿಗೆ ರಾಜ್ಯದ ವಿಭಾಗ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಕಾರ್ಯಕ್ರಮವನ್ನು ಏರ್ಪಡಿಸಿ ಸದ್ಭಾವನಾ ದಿನವನ್ನು ಆಚರಿಸುವುದರೊಂದಿಗೆ ಪ್ರತಿಜ್ಞೆಯನ್ನು ಸ್ವೀಕರಿಸಬೇಕೆಂದು ಕೂಡ ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ದಿನಾಂಕ 20/08/2016ರಂದು ಸದ್ಭಾವನಾ ದಿನಾಚರಣೆಯನ್ನು ನಿಮ್ಮ ವ್ಯಾಪ್ತಿಗೆ ಒಳಪಡುವ ಪದವಿ ಪೂರ್ವ ಕಾಲೇಜುಗಳಲ್ಲಿ ಆಚರಿಸಲು ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ತಿಳಿಸಿ, ಆಚರಿಸಿದ ಕುರಿತಂತೆ ಮಾಹಿತಿಯನ್ನು ಇಲಾಖೆಗೆ ನೀಡಲು ಸೂಚಿಸಿದೆ. ಮಾಹಿತಿಗಾಗಿ ಸರ್ಕಾರದ ಪತ್ರದ ಪ್ರತಿಯನ್ನು ಲಗತ್ತಿಸಿದೆ.

ಜಂಟಿ ನಿರ್ದೇಶಕರು (ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರುಗಳಿಗೆ ಮುಂದಿನ ಕ್ರಮಕ್ಕಾಗಿ.
2. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ವೆಬ್ ಸೈಟ್‌ಗೆ ಅಳವಡಿಸಲು.
3. ಕಛೇರಿ ಪ್ರತಿ.

ಸಂಖ್ಯೆ: ಸಿಆಸುಇ 01 ರಾಐಸ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 16.08.2016.

## ಸುತ್ತೋಲೆ

ವಿಷಯ: ದಿನಾಂಕ **20.8.2016** ರ ಶನಿವಾರ **"ಸದ್ಭಾವನಾ ದಿನ"** ವನ್ನಾಗಿ ಮತ್ತು ದಿನಾಂಕ **20.8.2016** ರಿಂದ **3.9.2016**ರವರೆಗೆ **"ಕೋಮು ಸೌಹಾರ್ದ ಪಾಕ್ಷಿಕ (Communal Harmony Fortnight)"** ಅನ್ನು ಆಚರಿಸುವ ಬಗ್ಗೆ.

*****

ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಕೇಂದ್ರ ಸರ್ಕಾರದ ಆದೇಶದಂತೆ ಪ್ರತಿವರ್ಷ **20ನೇ ಆಗಸ್ಟ್** ರಂದು ಸದ್ಭಾವನ ದಿನವನ್ನಾಗಿ ಆಚರಿಸಲಾಗುತ್ತಿದೆ. ಅದರಂತೆ ಈ ವರ್ಷ ದಿನಾಂಕ **20.08.2016** ರ ಶನಿವಾರದಂದು ಸದ್ಭಾವನಾ ದಿನವನ್ನಾಗಿ ಮತ್ತು ದಿನಾಂಕ **20.8.2016** ರಿಂದ **03.9.2016** ರವರೆಗೆ ಕೋಮು ಸೌಹಾರ್ದ ಪಾಕ್ಷಿಕ (Communal Harmony Fortnight) ವನ್ನು ರಾಜ್ಯದಾದ್ಯಂತ ಆಚರಿಸಬೇಕೆಂದು ಸರ್ಕಾರವು ನಿರ್ಧರಿಸಿದೆ. ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಈ ಸಂಬಂಧವಾಗಿ ಭಾರತ ಸ್ಕೌಟ್ಸ್ ಅಂಡ್ ಗೈಡ್ಸ್ ಮತ್ತು ಯೂತ್ ಅಸೋಸಿಯೇಷನ್ ಸಹಕಾರದೊಂದಿಗೆ ರಾಜ್ಯದ ವಿಭಾಗ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಕಾರ್ಯಕ್ರಮವನ್ನು ಏರ್ಪಡಿಸಿ ಸದ್ಭಾವನಾ ದಿನವನ್ನು ಆಚರಿಸುವುದರೊಂದಿಗೆ ಪ್ರತಿಜ್ಞೆಯನ್ನು ಸ್ವೀಕರಿಸಬೇಕೆಂದು ಕೂಡ ಸೂಚಿಸಲಾಗಿದೆ. ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾನಿಲಯಗಳ ಅಧೀನದಲ್ಲಿರುವ ಕಾಲೇಜುಗಳ ಮತ್ತು ಎಲ್ಲಾ ಶಾಲೆಗಳಲ್ಲಿ ದಿನಾಂಕ **20.8.2016** ರಂದು ಸದ್ಭಾವನಾ ದಿನಾಚರಣೆಯನ್ನು ಆಚರಿಸಬೇಕೆಂದು ಸಂಬಂಧಪಟ್ಟರಿಗೆ ಸೂಕ್ತ ಸೂಚನೆಗಳನ್ನು ನೀಡತಕ್ಕದ್ದು.

ಕಾರ್ಯಕ್ರಮವನ್ನು ನಡೆಸಿದ ಬಗ್ಗೆ ಸರ್ಕಾರಕ್ಕೆ ಒಂದು ಅನುಪಾಲನಾ ವರದಿಯನ್ನು ಕಳುಹಿಸಬೇಕೆಂದು ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಆಯಾ ಇಲಾಖಾ ಮುಖ್ಯಸ್ಥರಿಗೆ ಸೂಚಿಸಲಾಗಿದೆ.

ಕೆ. ಎಸ್. ರೋಹಿಣಿ
(ಕೆ.ಎಸ್. ರೋಹಿಣಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ. (ರಾಜಕೀಯ)

ಇವರಿಗೆ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು.
2. ಸ್ಥಾನಿಕ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
3. ಎಲ್ಲಾ ಜಿಲ್ಲಾಧಿಕಾರಿಗಳು.
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
5. ಎಲ್ಲಾ ವಿಶ್ವವಿದ್ಯಾನಿಲಯಗಳ ಕುಲಸಚಿವರುಗಳು.